I-b

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಜ್ಞಾನ ಸದನ ಎಜುಕೇಷನ್ ಸೊಸೈಟಿ-ಜೆಆರ್‌ಡಿ ಭಾಟೆ ಪ್ಯಾರಾ ಮೆಡಿಕಲ್ ಇನ್ಸ್ಟಿಟ್ಯೂಟ್, ಚಿಕ್ಕೋಡಿ, ಬೆಳಗಾಂ - ಪ್ಯಾರಾ ಮೆಡಿಕಲ್ ಕೋರ್ಸ್‌ನ ಮಂಜೂರಾತಿ ಬಗ್ಗೆ.

******

ಓದಲಾಗಿದೆ: ಪತ್ರ ಸಂಖ್ಯೆ: ಪಿಎಂಬಿ/73/06-07 ದಿನಾಂಕ 17.12.2007.

ಪ್ರಸ್ತಾವನೆ:

ಕರ್ನಾಟಕ ಪ್ಯಾರಾ ಮೆಡಿಕಲ್ ಬೋರ್ಡ್‌ನ ಸದಸ್ಯ ಕಾರ್ಯದರ್ಶಿಯವರು ಮೇಲೆ ಓದಲಾದ ತಮ್ಮ ಪತ್ರದಲ್ಲಿ ಜ್ಞಾನ ಸದನ ಎಜುಕೇಷನ್ ಸೊಸೈಟಿ-ಜೆಆರ್‌ಡಿ ಭಾಟೆ ಪ್ಯಾರಾ ಮೆಡಿಕಲ್ ಇನ್ಸ್ಟಿಟ್ಯೂಟ್, ಚಿಕ್ಕೋಡಿ, ಬೆಳಗಾಂ ಇದಕ್ಕೆ ಡಿಪ್ಲೊಮಾ ಇನ್ ಲ್ಯಾಬರೋಟರಿ ಟೆಕ್ನಾಲಜಿ ಮತ್ತು ಡಿಪ್ಲೊಮಾ ಇನ್ ಅಪರೇಷನ್ ಥಿಯೇಟರ್ ಟೆಕ್ನಾಲಜಿ ಕೋರ್ಸುಗಳ ಮಂಜೂರಾತಿಗಾಗಿ ಅರ್ಜಿಯನ್ನು ಪ್ಯಾರಾ ಮೆಡಿಕಲ್ ಮಂಡಳಿಗೆ ಸಲ್ಲಿಸಿದ್ದು, ಮಂಡಳಿಯು ವಿಷಯ ತಜ್ಞರ ತಂಡವನ್ನು ರಚಿಸಿ ಕೋರ್ಸುಗಳನ್ನು ಸಂಸ್ಥೆಯು ನಡೆಸಲು ಹೊಂದಿರುವ ಮೂಲಭೂತ ಸೌಕರ್ಯಗಳನ್ನು ಪರವೀಕ್ಷಿಸಿ ಅದರ ವರದಿಯನ್ನು ಸಲ್ಲಿಸಲು ಸೂಚಿಸಿತ್ತೆಂದು, ತಜ್ಞರ ತಂಡವು ಸಂಸ್ಥೆಗೆ ಭೇಟಿ ನೀಡಿ ಪರಿವೀಕ್ಷಿಸಿ, ವರದಿಯನ್ನು ಸೂಕ್ತ ಶಿಫಾರಸ್ಸಿನೊಂದಿಗೆ ಮಂಡಳಿಗೆ ಸಲ್ಲಿಸಿತ್ತೆಂದು, ತಜ್ಞರ ತಂಡದ ಪರಿವೀಕ್ಷಣ ವರದಿಯನ್ನು ಮಂಡಳಿಯ ಸಭೆಯಲ್ಲಿ ವಿಶ್ಲೇಷಿಸಿ, ವಾರ್ಷಿಕ ತಲಾ 20 ಸೀಟುಗಳ ಪ್ರವೇಶ ಮಿತಿಯೊಂದಿಗೆ 2008-09ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲು ಶಿಫಾರಸ್ಸು ಮಾಡಿದೆಯೆಂದು ವರದಿ ಮಾಡುತ್ತಾ, ಮಂಜೂರಾತಿ ನೀಡುವಂತೆ ಸರ್ಕಾರವನ್ನು ಕೋರಿರುತ್ತಾರೆ.

ವಿಷಯವನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ, ಜ್ಞಾನ ಸದನ ಎಜುಕೇಷನ್ ಸೊಸೈಟಿ-ಜೆಆರ್‌ಡಿ ಭಾಟೆ ಪ್ಯಾರಾ ಮೆಡಿಕಲ್ ಇನ್ಸ್ಟಿಟ್ಯೂಟ್, ಚಿಕ್ಕೋಡಿ, ಬೆಳಗಾಂ ಇದಕ್ಕೆ ಡಿಪ್ಲೊಮಾ ಇನ್ ಲ್ಯಾಬರೋಟರಿ ಟೆಕ್ನಾಲಜಿ ಮತ್ತು ಡಿಪ್ಲೊಮಾ ಇನ್ ಅಪರೇಷನ್ ಥಿಯೇಟರ್ ಟೆಕ್ನಾಲಜಿ ಕೋರ್ಸುಗಳನ್ನು ವಾರ್ಷಿಕ ತಲಾ 20 ಸೀಟುಗಳ ಪ್ರವೇಶ ಮಿತಿಯೊಂದಿಗೆ 2008-09ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡಲು ಸರ್ಕಾರವು ತೀರ್ಮಾನಿಸಿ, ಈ ಆದೇಶವನ್ನು ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಆಕುಕ 09 ಎಂಎಂಇ 2009, ಬೆಂಗಳೂರು,
ದಿನಾಂಕ 30-06-2009

ಜ್ಞಾನ ಸದನ ಎಜುಕೇಷನ್ ಸೊಸೈಟಿ-ಜೆಆರ್‌ಡಿ ಭಾಟೆ ಪ್ಯಾರಾ ಮೆಡಿಕಲ್ ಇನ್ಸ್ಟಿಟ್ಯೂಟ್, ಚಿಕ್ಕೋಡಿ, ಬೆಳಗಾಂ ಇದಕ್ಕೆ ಡಿಪ್ಲೊಮಾ ಇನ್ ಲ್ಯಾಬರೋಟರಿ ಟೆಕ್ನಾಲಜಿ ಮತ್ತು ಡಿಪ್ಲೊಮಾ ಇನ್ ಅಪರೇಷನ್ ಥಿಯೇಟರ್ ಟೆಕ್ನಾಲಜಿ ಕೋರ್ಸುಗಳನ್ನು ವಾರ್ಷಿಕ ತಲಾ 20 ಸೀಟುಗಳ ಪ್ರವೇಶ ಮಿತಿಯೊಂದಿಗೆ 2008-09ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲುಈ ಕೆಳಕಂಡ ಷರತ್ತುಗಳಿಗೊಳಪಟ್ಟು ಮಂಜೂರಾತಿ ನೀಡಲಾಗಿದೆ.

## ಷರತ್ತುಗಳು

(1) ಯಾವುದೇ ಪ್ಯಾರಾ ಮೆಡಿಕಲ್ ಕೋರ್ಸುಗಳನ್ನು ಪ್ರಾರಂಭ ಮಾಡುವ ಮೊದಲು ಸಂಸ್ಥೆಯು ಸಂಯೋಜನಾ ಶುಲ್ಕದ ರೂಪದಲ್ಲಿ ಪ್ರತಿ ಕೋರ್ಸಿಗೆ ರೂ.30,000/- (ಮೂವತ್ತು ಸಾವಿರ ರೂಪಾಯಿಗಳು ಮಾತ್ರ) ಹಾಗೂ ಪ್ರತಿ ವರ್ಷ ಸಂಯೋಜನಾ ನವೀಕರಣ ಶುಲ್ಕವಾಗಿ ರೂ.10,000/- (ಹತ್ತು ಸಾವಿರ ರೂಪಾಯಿಗಳು ಮಾತ್ರ) ಅನ್ನು ಪ್ಯಾರಾ ಮೆಡಿಕಲ್ ಬೋರ್ಡಿಗೆ ಸಂದಾಯ ಮಾಡತಕ್ಕದ್ದು.

(2) ಸಂಸ್ಥೆಯವರು ಕೋರ್ಸನ್ನು ಪ್ರಾರಂಭಿಸುವ ಮೊದಲು ಬೋರ್ಡ್ ನಿಗಧಿಪಡಿಸುವ ಬ್ಯಾಂಕ್ ಗ್ಯಾರಂಟಿಯನ್ನು ಒದಗಿಸತಕ್ಕದ್ದು.

(3) ಸದರಿ ಕೋರ್ಸುಗಳಿಗೆ ವಿದ್ಯಾರ್ಥಿ ಪ್ರವೇಶವನ್ನು ವರ್ಷಕ್ಕೆ ಒಂದು ಬಾರಿ ನವೆಂಬರ್ ತಿಂಗಳೊಳಗೆ ತೆಗೆದುಕೊಂಡು ಜನವರಿ ಅಥವಾ ಫೆಬ್ರವರಿ ತಿಂಗಳ ಮದ್ಯಾಂತರದೊಳಗೆ ವಿದ್ಯಾರ್ಥಿಗಳ ಪಟ್ಟಿಯನ್ನು ಮೂಲ ಅಂಕಪಟ್ಟಿ ಮತ್ತು ದೃಢೀಕರಣಗಳನ್ನು ಬೋರ್ಡಿಗೆ ಸಲ್ಲಿಸತಕ್ಕದ್ದು.

(4) ಸದರಿ ಕೋರ್ಸುಗಳಿಗೆ ಪ್ರವೇಶ ಪಡೆದ ಪ್ರತಿ ವಿದ್ಯಾರ್ಥಿಗೆ ರೂ.500.00 ರಂತೆ ನೊಂದಣಿ ಶುಲ್ಕದೊಂದಿಗೆ ವಿದ್ಯಾರ್ಥಿಗಳ ಆಯ್ಕೆ ಪಟ್ಟಿಯನ್ನು ಅವರ ವಿದ್ಯಾರ್ಹತೆಯ ಪ್ರಮಾಣ ಪತ್ರದೊಂದಿಗೆ ಮಂಜೂರಾತಿಗಾಗಿ ಪ್ಯಾರಾ ಮೆಡಿಕಲ್ ಬೋರ್ಡಿಗೆ ಸಲ್ಲಿಸತಕ್ಕದ್ದು.

(5) ಪ್ಯಾರಾ ಮೆಡಿಕಲ್ ಕೋರ್ಸಿಗೆ ಪ್ರವೇಶ ಪಡೆಯಲು ಕನಿಷ್ಟ ವಿದ್ಯಾರ್ಹತೆಯು ಪಿ.ಯು.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರಬೇಕು.

(6) ಪ್ಯಾರಾ ಮೆಡಿಕಲ್ ಕೋರ್ಸಿಗೆ ಪ್ರವೇಶ ಪಡೆದ ಪ್ರತಿ ವಿದ್ಯಾರ್ಥಿಯಿಂದ ಸರ್ಕಾರ ನಿಗದಿಪಡಿಸಿದ ಶುಲ್ಕವನ್ನು ಮಾತ್ರ ಪಡೆಯತಕ್ಕದ್ದು.

(7) ಸರ್ಕಾರ ಮಂಜೂರಾತಿ ನೀಡಿದ ಪ್ರವೇಶ ಮಿತಿಗಿಂತ ಹೆಚ್ಚಿನ ವಿದ್ಯಾರ್ಥಿಗಳಿಗೆ ಪ್ರವೇಶ ನೀಡತಕ್ಕದ್ದಲ್ಲ. ಒಂದು ವೇಳೆ ನಿಗದಿಪಡಿಸಿದ ಪ್ರವೇಶ ಮಿತಿಗಿಂತ ಹೆಚ್ಚಿನ ಪ್ರವೇಶ ಮಾಡಿಕೊಂಡಲ್ಲಿ ಅದರಿಂದ ಉಂಟಾಗುವ ಅನಾನುಕೂಲ ಸಮಸ್ಯೆಗಳಿಗೆ ಸಂಸ್ಥೆಯೇ ಜವಾಬ್ದಾರಿಯಾಗಿರುತ್ತದೆ.

(8) ಸಂಸ್ಥೆಯವರಿಗೆ ನಿಗಧಿಪಡಿಸಿದ ಸೀಟುಗಳಲ್ಲಿ ಶೇ.20ರಷ್ಟನ್ನು ಸರ್ಕಾರದಿಂದ ಆಯ್ಕೆ ಮಾಡಿದ ಅಭ್ಯರ್ಥಿಗಳಿಗೆ ಪ್ರವೇಶ ನೀಡಲು ಸಂಸ್ಥೆಯು ಬದ್ದವಾಗಿರತಕ್ಕದ್ದು.

(9) ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸಿದ ನಿಯಮಾವಳಿಯಂತೆ, ಪ್ಯಾರಾ ಮೆಡಿಕಲ್ ಕೋರ್ಸಿಗೆ ಪ್ರವೇಶ ಪಡೆಯುವ ಪ್ರತಿ ವಿದ್ಯಾರ್ಥಿಯು ವಯೋಮಿತಿ, ಪಠ್ಯಕ್ರಮ, ಕೋರ್ಸಿನ ಅವಧಿ ಹಾಗೂ ಪರೀಕ್ಷಾ ಕ್ರಮ ಮತ್ತು ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸಿದ ಇತರೆ ನಿಯಮಗಳನ್ನು ಸಂಸ್ಥೆಯು ಚಾಚೂ ತಪ್ಪದೇ ಕಡ್ಡಾಯವಾಗಿ ಪಾಲಿಸತಕ್ಕದ್ದು.

(10) ಸಂಸ್ಥೆಯು ಸುಸಜ್ಜಿತ ತರಗತಿ ಕೊಠಡಿ, ಪ್ರಯೋಗಶಾಲೆ, ವಾಚನಾಲಯ, ವಿದ್ಯಾರ್ಥಿನಿಲಯ ಹಾಗೂ ಇತರೆ ಸೌಲಭ್ಯವನ್ನು ವಿದ್ಯಾರ್ಥಿಗಳಿಗೆ ಒದಗಿಸತಕ್ಕದ್ದು.

(11) ಸದರಿ ಸಂಸ್ಥೆಯು ಹೊಂದಿರುವ ಮೂಲಭೂತ ಸೌಕರ್ಯಗಳ ಬಗ್ಗೆ ವಿದ್ಯಾರ್ಥಿಗಳು ಮೊದಲ ವರ್ಷದ ಪರೀಕ್ಷೆಯನ್ನು ತೆಗೆದುಕೊಳ್ಳುವ ಪೂರ್ವದಲ್ಲಿ ಪ್ಯಾರಾ ಮೆಡಿಕಲ್ ಬೋರ್ಡ್ ಇಚ್ಛಿಸಿದಲ್ಲಿ ಎರಡನೇ ಬಾರಿಗೆ ಸಂಸ್ಥೆಯನ್ನು ತಪಾಸಣೆ ಮಾಡತಕ್ಕದ್ದು.

(12) ಸರ್ಕಾರದಿಂದ ಯಾವುದೇ ಆರ್ಥಿಕ ಸೌಲಭ್ಯ ಅಥವಾ ಅನುದಾನವನ್ನು ಸಂಸ್ಥೆಗೆ ನೀಡಲಾಗುವುದಿಲ್ಲ.

(13) ಸಂಸ್ಥೆಯನ್ನು ಪ್ಯಾರಾ ಮೆಡಿಕಲ್ ಬೋರ್ಡ್‌ನಲ್ಲಿ ನೋಂದಣಿ ಮಾಡಿಸತಕ್ಕದ್ದು ಹಾಗೂ ಪ್ಯಾರಾ ಮಡಿಕಲ್ ಬೋರ್ಡ್ ನಿಗದಿಪಡಿಸುವ ಮಾದರಿಯನ್ನು ಅನುಸರಿಸತಕ್ಕದ್ದು.

(14) ಪ್ಯಾರಾ ಮೆಡಿಕಲ್ ಕೋರ್ಸಿನ ಅಂತ್ಯದಲ್ಲಿ ಪ್ಯಾರಾ ಮೆಡಿಕಲ್ ಬೋರ್ಡ್ ನಡೆಸುವ ಪರೀಕ್ಷೆಯನ್ನು ವಿದ್ಯಾರ್ಥಿಗಳು ತೆಗೆದುಕೊಂಡು, ಉತ್ತೀರ್ಣರಾಗುವ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರವನ್ನು ಪ್ಯಾರಾ ಮೆಡಿಕಲ್ ಬೋರ್ಡಿನಿಂದ ಪಡೆಯತಕ್ಕದ್ದು.

(15) ಪ್ರತಿ ತಪಾಸಣೆಗೆ ಮತ್ತು ಒಂದು ಕೋರ್ಸಿಗೆ ಸಂಸ್ಥೆಯು ರೂ.10,000/- (ಹತ್ತು ಸಾವಿರ ರೂಪಾಯಿಗಳು ಮಾತ್ರ) ಅನ್ನು ತಪಾಸಣಾ ಶುಲ್ಕವಾಗಿ ಪ್ಯಾರಾ ಮೆಡಿಕಲ್ ಬೋರ್ಡಿಗೆ ಪಾವತಿ ಮಾಡತಕ್ಕದ್ದು.

(16) ದಿನಾಂಕ 30-03-1999 ಸಂಖ್ಯೆ: ಆಕುಕ 144 ಎಂಎಂಇ 98ರ ಸರ್ಕಾರಿ ಆದೇಶದಲ್ಲಿ ನಿರ್ದಿಷ್ಟಪಡಿಸಿರುವ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು ಹಾಗೂ ಆಕುಕ 328 ಎಂಎಸ್‌ಎಫ್ 07, ದಿನಾಂಕ 27-07-2007ರಲ್ಲಿ ತಿಳಿಸಿರುವ ಆದೇಶವನ್ನು ಪಾಲಿಸತಕ್ಕದ್ದು.

(17) ಪ್ರಸ್ತುತ ವಿಧಿಸುತ್ತಿರುವ ಮೇಲ್ಕಂಡ ನಿಗದಿತ ಷರತ್ತುಗಳನ್ನು ಉಲ್ಲಂಘಿಸಿದ ಸಂದರ್ಭದಲ್ಲಿ ಅಂತಹ ಪ್ಯಾರಾ ಮೆಡಿಕಲ್ ಶಾಲೆ/ಕೋರ್ಸ್‌ನ ಮಾನ್ಯತೆಯನ್ನು ರದ್ದು ಪಡಿಸಬಹುದೆಂದು ಸಂಸ್ಥೆಯು ರೂ.100 ಛಾಪಾ ಕಾಗದದಲ್ಲಿ ಮುಚ್ಚಳಿಕೆಯನ್ನು ನೀಡತಕ್ಕದ್ದು.

(18) ಪ್ರಸ್ತಾವಿತ ಶಾಲೆಯ ಕಟ್ಟಡವು ಬಾಡಿಗೆ/ಲೀಸ್ ಆದ ಪಕ್ಷದಲ್ಲಿ ಬಾಡಿಗೆ/ಲೀಸ್ ಕರಾರು ಪತ್ರವು ರೂ.100 ಛಾಪಾ ಕಾಗದದಲ್ಲಿರಬೇಕು ಮತ್ತು ಬಾಡಿಗೆ/ಲೀಸ್ ಅವಧಿಯು ಕನಿಷ್ಠ 10 ವರ್ಷಗಳಿಗಿರಬೇಕು.

(19) ಪ್ಯಾರಾ ಮೆಡಿಕಲ್ ಶಾಲೆ/ಕೋರ್ಸ್ ಮಂಜೂರಾತಿ ಆದ ದಿನಾಂಕದಿಂದ 5 ವರ್ಷದೊಳಗಾಗಿ ಮಂಜೂರಾತಿ ಪಡೆದ ಸಂಸ್ಥೆಯು ಪ್ಯಾರಾ ಮೆಡಿಕಲ್ ಶಾಲೆ/ಕೋರ್ಸ್‌ನ್ನು ನಡೆಸಲು ತನ್ನದೆ ಆದ ಸ್ವಂತ ಕಟ್ಟಡವನ್ನು ಹೊಂದುವುದಾಗಿ ರೂ.100 ಛಾಪಾ ಕಾಗದದಲ್ಲಿ ಮುಚ್ಚಳಿಕೆಯನ್ನು ನೀಡತಕ್ಕದ್ದು.

(20) ಸಂಸ್ಥೆಯು ಪ್ರತಿ ವರ್ಷ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡುವ ಮೊದಲು ಸಂಸ್ಥೆಯು ಪ್ರಾಂಶುಪಾಲರನ್ನು ಒಳಗೊಂಡಂತೆ ಎಲ್ಲಾ ಸಿಬ್ಬಂದಿಗಳ (ಬೋಧಕ ಮತ್ತು ಬೋಧಕೇತರ) ಸಂಪೂರ್ಣ ಮಾಹಿತಿಯನ್ನು ನೀಡತಕ್ಕದ್ದು.

(21) ಮೇಲ್ಕಂಡ ಯಾವುದೇ ಷರತ್ತುಗಳನ್ನು ಸಂಸ್ಥೆಯು ಉಲ್ಲಂಘಿಸಿದ್ದಲ್ಲಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

(22) ಪ್ಯಾರಾ ಮೆಡಿಕಲ್ ಹೊಸ ಕೋರ್ಸ್‌ಗಳನ್ನು ಪ್ರಾರಂಭಿಸಲು ಬ್ಯಾಂಕ್ ಗ್ಯಾರಂಟಿ ಅಫಿಲಿಯೇಷನ್ ಫೀ ಮತ್ತು ವಿದ್ಯಾರ್ಥಿಗಳ ಮೂಲ ದಾಖಲೆಗಳನ್ನು ಸಂಸ್ಥೆಗಳು ದಿನಾಂಕ 31.01.2009ರೊಳಗಾಗಿ ಪ್ಯಾರಾ ಮೆಡಿಕಲ್ ಬೋರ್ಡಿಗೆ ನೀಡಿದಲ್ಲಿ 2008-09ನೇ ಸಾಲಿಗೆ ಮಂಜೂರಾತಿಯು ಅನ್ವಯಿಸತಕ್ಕದ್ದು ಅಥವಾ ದಿನಾಂಕ 01.02.2009ರ ನಂತರ ನೀಡಿದಲ್ಲಿ 2009-10ನೇ ಸಾಲಿಗೆ ಮಂಜೂರಾತಿಯು ಜಾರಿಗೊಳಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

ವಿ. [signature] 30/6/2009
(ವಿ. ಶ್ರೀರಾಮರೆಡ್ಡಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಇಲಾಖೆ,
(ವೈದ್ಯಕೀಯ ಶಿಕ್ಷಣ)

ಇವರಿಗೆ:

1. ವೈದ್ಯಕೀಯ ಶಿಕ್ಷಣ ನಿರ್ದೇಶಕರು, ಆನಂದರಾವ್ ವೃತ್ತ, ಬೆಂಗಳೂರು-09.
2. ಸದಸ್ಯ ಕಾರ್ಯದರ್ಶಿ, ಪ್ಯಾರಾ ಮೆಡಿಕಲ್ ಬೋರ್ಡ್, ಲಕ್ಷ್ಮಿ ಕಾಂಪ್ಲೆಕ್ಸ್, ಮೊದಲನೇ ಮಹಡಿ, ನಂ.5, ಹೊಸ ನಂ.40/20ಎ, ವಾಣಿ ವಿಲಾಸ ಆಸ್ಪತ್ರೆ ಎದುರು, ಫೋರ್ಟ್, ಬೆಂಗಳೂರು-560002.
3. ಅಧ್ಯಕ್ಷರು/ಕಾರ್ಯದರ್ಶಿ/ಪ್ರಾಂಶುಪಾಲರು, ಜ್ಞಾನ ಸದನ ಎಜುಕೇಷನ್ ಸೊಸೈಟಿ ಜೆ.ಆರ್.ಡಿ. ಭಾಟೆ ಪ್ಯಾರಾ ಮೆಡಿಕಲ್ ಇನ್ಸಿಟ್ಯೂಟ್, ಚಿಕ್ಕೋಡಿ, ಬೆಳಗಾಂ.

Attested by
PRINCIPAL
J.R.D. Bhate Para Medical
Science Courses, Chikodi.